# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 845 |
| ಮಾನ್ಯ ಸದಸ್ಯರ ಹೆಸರು | ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 18-12-2018 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಘಟಕಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅವಶ್ಯವಿರುವ ವೈದ್ಯರನ್ನು ನೇಮಕ ಮಾಡಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು? | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನೇಮಕ ಮಾಡಲು ಹಾಗೂ ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕೆಪಿಎಸ್‌ಸಿ ಮೂಲಕ ಆಯ್ಕೆಗೊಂಡು 255 ತಜ್ಞ ವೈದ್ಯರು ಸ್ಥಳ ಆಯ್ಕೆ ಮಾಡಿಕೊಂಡಿದ್ದು 156 ತಜ್ಞ ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆ.<br><br>255 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು, ಸ್ಥಳ ಆಯ್ಕೆಮಾಡಿಕೊಂಡಿದ್ದು 230 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆ. ಹಾಗೂ ದಿ:04.12.2018 ರಂದು ಕೆಪಿಎಸ್‌ಸಿ ಮುಖಾಂತರ ಆಯ್ಕೆಯಾಗಿ ಸಮಾಲೋಚನೆಯಲ್ಲಿ ಸ್ಥಳ ಆಯ್ಕೆಮಾಡಿಕೊಳ್ಳದ 22 ಹೈದ್ರಾಬಾದ್-ಕರ್ನಾಟಕದ ರಾಜ್ಯ ವೃಂದದಲ್ಲಿ 180 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳಿಗೆ ನೇಮಕಾತಿ ಆದೇಶವನ್ನು ನೀಡಲಾಗಿರುತ್ತದೆ. ಹಾಗೂ 127 ತಜ್ಞ ವೈದ್ಯರುಗಳಿಗೆ ನೇಮಕಾತಿ ಆದೇಶವನ್ನು ನೀಡಲಾಗಿರುತ್ತದೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಮತ್ತು ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸರ್ಕಾರಿ ಆದೇಶ ಸಂಖ್ಯೆ: ಆಕುಕ 297 ಹೆಚ್‌ಎಸ್‌ಹೆಚ್ 2015, ದಿನಾಂಕ:22-04-2016 ಮತ್ತು ಸೇರ್ಪಡೆ ದಿ:07.10.2016 ಹಾಗೂ ಆಕುಕ 359 ಹೆಚ್‌ಎಸ್‌ಹೆಚ್ 2016, ದಿನಾಂಕ:01-08-2016 (ಎಂಬಿಬಿಎಸ್ ವೈದ್ಯಾಧಿಕಾರಿಗಳ ಹುದ್ದೆಗೆ ಎದುರು ಆಯುಷ್ ವೈದ್ಯರ ನೇಮಕಾತಿ)<br><br>ತಜ್ಞ ವೈದ್ಯರನ್ನು **"On Call Basis"** ಮೇಲೆ ತೆಗೆದುಕೊಳ್ಳಲು ಸರ್ಕಾರದ ಆದೇಶ ಸಂಖ್ಯೆಆಕುಕ 178 ಹೆಚ್‌ಎಸ್‌ಹೆಚ್ 2011 ದಿನಾಂಕ: 20-05-2016. |

| | | |
|---|---|---|
| | | ಸರ್ಕಾರದ ಆದೇಶ ಸಂಖ್ಯೆ: ಆಕುಕ 554 ಹೆಚ್‌ಎಸ್‌ಹೆಚ್ 2016, ದಿನಾಂಕ: 22-11-2016 ರಲ್ಲಿ ಸೂಚಿತವಾದಂತೆ ತಜ್ಞ ವೈದ್ಯರುಗಳ ಎದುರು ಹುದ್ದೆಯಲ್ಲಿ ಎಂಬಿಬಿಎಸ್ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಆಯುಕ್ತರು, ಆರೋಗ್ಯ ಮತ್ತು ಕು.ಕ ಸೇವೆಗಳು, ಬೆಂಗಳೂರು ಸುತ್ತೋಲೆ ಸಂಖ್ಯೆ: ಜೆಆರ್‌ಓ(1ಎ)/101/2012-13, ದಿನಾಂಕ: 09-12-2016 ರಂತೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು/ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಅನುಮತಿ ನೀಡಲಾಗಿದೆ.<br><br>ಎಂ.ಬಿ.ಬಿ.ಎಸ್. ಪದವಿಯನ್ನು ಸರ್ಕಾರಿ ಕೋಟಾದಲ್ಲಿ ಪೂರ್ಣಗೊಳಿಸಿದ ವೈದ್ಯರುಗಳನ್ನು ಒಂದು ವರ್ಷ ಕಡ್ಡಾಯ ಗ್ರಾಮೀಣ ಸೇವೆಯಡಿಯಲ್ಲಿ ಸೇವೆ ಸಲ್ಲಿಸಲು ನೇಮಿಸಲಾಗುತ್ತಿದೆ ಹಾಗೂ ವೈದ್ಯರುಗಳನ್ನು ಖಾಲಿ ಹುದ್ದೆಗೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುತ್ತಿದೆ.<br><br>ವೈದ್ಯರ ನೇಮಕಾತಿ ಸಮಾಲೋಚನೆ ನಂತರ ಹೆಚ್ಚಿನ ವೈದ್ಯರು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇರುವುದರಿಂದ ಕೆಪಿಎಸ್‌ಸಿ ಯಿಂದ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹೆಚ್ಚುವರಿ ಪಟ್ಟಿಯನ್ನು ಕಳುಹಿಸಿಕೊಡುವಂತೆ ಕರ್ನಾಟಕ ಲೋಕಸೇವಾ ಆಯೋಗಕ್ಕೆ ದಿನಾಂಕ: 01.12.2018 ರಂದು ಪತ್ರ ಬರೆಯಲಾಗಿದೆ.<br><br>ಕರ್ನಾಟಕ ಲೋಕಸೇವಾ ಆಯೋಗದಿಂದ ಹೆಚ್ಚುವರಿ ಪಟ್ಟಿಯನ್ನು ನೀಡಿದನಂತರ ನಿಯಮಾನುಸಾರ ವೈದ್ಯರುಗಳಿಗೆ ನೇಮಕಾತಿ ಆದೇಶವನ್ನು ನೀಡಲು ಕ್ರಮವಹಿಸಲಾಗುತ್ತದೆ. |

**ಸಂಖ್ಯೆ: ಆಕುಕ 54 ಹೆಚ್‌ಎಸ್‌ಡಿ 2018**

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು